ESTD : No. JRB/Cell.II/69/Regn-4876/77-78 ✆:080-26601442
Date : 09-12-1977

# ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟ ನಿಯಮಿತ

## THE BANGALORE CITY DIST. CO-OPERATIVE UNION LTD.,

' ಸಹಕಾರ ಭವನ ' ನಂ. 1/3, 3ನೇ ಮುಖ್ಯರಸ್ತೆ, ಚಾಮರಾಜಪೇಟೆ, ಬೆಂಗಳೂರು–560 018

E-mail: bcdcu1977@gmail.com

**ಹೆಚ್.ಟಿ. ನಾಗೇಶ್** ಅಧ್ಯಕ್ಷರು | **ಚಾಮರಾಜು ಕೆ.ಎಸ್.** ಉಪಾಧ್ಯಕ್ಷರು | **ವೆಂಕಟೇಶ್ ಎಂ.** ಖಜಾಂಚಿ

## ಪ್ರಕಟಣೆಗಾಗಿ

ಬೆಂಗಳೂರು :– ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟ ನಿ., ಬೆಂಗಳೂರು ಇವುಗಳ ಸಂಯುಕ್ತ ಆಶ್ರಯದಲ್ಲಿ ದಿನಾಂಕ: 29.06.2024 ರಂದು ಹೆಸರುಘಟ್ಟ ರೈತರ ಸೇವಾ ಸಹಕಾರ ಸಂಘ ನಿ., ಯಲಹಂಕ ತಾಲ್ಲೂಕು ಇವರುಗಳ ಸಂಯುಕ್ತ ಆಶ್ರಯದಲ್ಲಿ ವ್ಯವಸಾಯ ಸೇವಾ ಸಹಕಾರ ಸಂಘಗಳ ಅಧ್ಯಕ್ಷರು, ನಿರ್ದೇಶಕರು ಮತ್ತು ಮುಖ್ಯಕಾರ್ಯನಿರ್ವಾಹಕರುಗಳಿಗೆ ಒಂದು ದಿನದ ಜಿಲ್ಲಾ ಮಟ್ಟದ ವಿಶೇಷ ತರಬೇತಿ ಕಾರ್ಯಕ್ರಮವನ್ನು ಹೆಸರುಘಟ್ಟ ರೈತರ ಸೇವಾ ಸಹಕಾರ ಸಂಘದ ಆವರಣದಲ್ಲಿ ಏರ್ಪಡಿಸಲಾಗಿತ್ತು.

ಸಮಾರಂಭದ ಉದ್ಘಾಟನೆಯನ್ನು ಸನ್ಮಾನ್ಯ ಶ್ರೀ ಹೆಚ್.ಡಿ ಕೃಷ್ಣಪ್ಪ ಅಧ್ಯಕ್ಷರು, ಹೆಸರುಘಟ್ಟ ರೈತರ ಸೇವಾ ಸಹಕಾರ ಸಂಘ ನಿ., ಬೆಂಗಳೂರು ಇವರು ನೆರವೇರಿಸಿ ಮಾತನಾಡುತ್ತಾ, ಎಲ್ಲಾ ವ್ಯವಸಾಯ ಸೇವಾ ಸಹಕಾರ ಸಂಘಗಳ ವಾರ್ಷಿಕ ಮಹಾಸಭೆ ಮುಗಿದ ನಂತರ ಸಹಕಾರ ಶಿಕ್ಷಣ ನಿಧಿಯನ್ನು ಮಹಾಮಂಡಳಕ್ಕೆ ನೀಡಬೇಕೆಂದು ಮುಖ್ಯಕಾರ್ಯನಿರ್ವಹಕರುಗಳಿಗೆ ತಿಳಿಸಿದರು ಇದಕ್ಕೆ ಪ್ರತಿಯಾಗಿ ಮಹಾಮಂಡಳವು ವಿವಿಧ ರೀತಿಯ ತರಬೇತಿಗಳನ್ನು ನೀಡುವುದರಿಂದ ಸಹಕಾರ ಸಂಘಗಳಲ್ಲಿ ಕಾರ್ಯನಿರ್ವಹಿಸಲು ಅನುಕೂಲವಾಗುತ್ತದೆ ಎಂದು ತಿಳಿಸಿದರು.

ಸಮಾರಂಭದಲ್ಲಿ ಅಧ್ಯಕ್ಷತೆ ವಹಿಸಿದ್ದ ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟದ ಅಧ್ಯಕ್ಷರಾದ ಶ್ರೀ ಹೆಚ್.ಟಿ. ನಾಗೇಶ್‌ರವರು ಮಾತನಾಡುತ್ತಾ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳವು ಮಾತೃ ಸಂಸ್ಥೆಯಾಗಿದ್ದು ಸಹಕಾರ ಶಿಕ್ಷಣ ತರಬೇತಿ ಪ್ರಚಾರ ಹಮ್ಮಿಕೊಳ್ಳುವುದರ ಮೂಲಕ ಪ್ರಾಥಮಿಕ ಸಂಘಗಳು ರಾಜ್ಯ ಮಟ್ಟ, ಜಿಲ್ಲಾ ಮಟ್ಟ ಹಾಗೂ ತಾಲ್ಲೂಕು ಮಟ್ಟದ ಸದಸ್ಯರುಗಳಿಗೆ ತರಬೇತಿಯನ್ನು ನೀಡುವ ಉದ್ದೇಶ ಹೊಂದಿದೆ ಹಾಗೂ ಸಹಕಾರ ವಾರ ಪತ್ರಿಕೆಯೂ ಇಡೀ ದೇಶದಲ್ಲೇ ನಮ್ಮ ಸಂಸ್ಥೆಯೊಂದೇ ವಾರಕ್ಕೆ ಒಂದು ಅಂದರೆ ತಿಂಗಳಿ 4 ವಾರಪತ್ರಿಕೆಯನ್ನು ಸಂಘಗಳ ಬಾಗಿಲಿಗೆ ತಲುಪಿಸುವ ಕೆಲಸವನ್ನು ಮಾಡುತ್ತಾ ಬಂದಿದೆ ಹಾಗೂ 8 ಕೆ.ಐ.ಸಿ.ಎಂ ನ ಸಂಸ್ಥೆಗಳು 6 ತಿಂಗಳ ಅವಧಿಯ ಡಿ.ಸಿ.ಎಂ ಕೋರ್ಸ್‌ನ್ನು ನೀಡುತ್ತಿದ್ದು, ಈ ತರಬೇತಿಯನ್ನು ಪಡೆದಂತಹ ಅಭ್ಯರ್ಥಿಗಳಿಗೆ ಸಹಕಾರ ಕ್ಷೇತ್ರದಲ್ಲಿ ಯಾವುದೇ ಸಂಸ್ಥೆಯಲ್ಲಿ ಕೆಲಸ ನಿರ್ವಹಿಸಲು ನೇಮಕಾತಿಯ ಸಮಯದಲ್ಲಿ ಆದ್ಯತೆಯನ್ನು ನೀಡಲಾಗುತ್ತದೆ. ಇದನ್ನು ಸದುಪಯೋಗಪಡಿಸಿಕೊಳ್ಳಬೇಕೆಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಮುಖ್ಯಅತಿಥಿಗಳಾಗಿ ಶ್ರೀ ತಿಮ್ಮರಾಯಗೌಡ. ಎ ನಿರ್ದೇಶಕರು, ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟ ನಿ., ಬೆಂಗಳೂರು ಇವರು ಉಪಸ್ಥಿತರಿದ್ದರು.

..........2



ಕಾರ್ಯಕ್ರಮದಲ್ಲಿ ಉಪನ್ಯಾಸಕರಾಗಿ ಆಗಮಿಸಿರುವಂತಹ ಶ್ರೀ ಶಶಿಧರಎಲೆ ಸಹಕಾರ ಸಂಘಗಳ ಅಪರ ನಿಬಂಧಕರು (ನಿವೃತ್ತ) ಬೆಂಗಳೂರು ಇವರು ಎಲ್ಲಾ ರೈತರ ಸೇವಾ ಸಹಕಾರ ಸಂಘಗಳಲ್ಲಿ ಚುನಾವಣಾ ವಿಧಿ ವಿಧಾನಗಳ ಬಗ್ಗೆ ಉಪನ್ಯಾಸವನ್ನು ನೀಡಿದರು ನಂತರ ರಾಜ್ಯ ತರಬೇತುದಾರರಾದ ಶ್ರೀ ಸ್ಟಾರ್ ವೆಂಕಟೇಶ್ ಇವರು ವ್ಯಕ್ತಿತ್ವ ವಿಕಸನ ಮತ್ತು ಮಾನಸಿಕ ಒತ್ತಡ ನಿರ್ವಹಣೆ ಕುರಿತು ಉಪನ್ಯಾಸವನ್ನು ನೀಡಿದರು ಹಾಗೂ ಮತ್ತೊಬ್ಬ ಉಪನ್ಯಾಸಕರಾದ ಶ್ರೀ ಪಿ. ರುದ್ರಪ್ಪ ಸಲಹೆಗಾರರು, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು ಇವರು ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ಚಟುವಟಿಕೆಗಳ ಕುರಿತು ಉಪನ್ಯಾಸವನ್ನು ಮಾಹಿತಿಯನ್ನು ನೀಡಿದರು. ಕಾರ್ಯಕ್ರಮದಲ್ಲಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಅಧ್ಯಕ್ಷರು, ನಿರ್ದೇಶಕರು ಮತ್ತು ಮುಖ್ಯಕಾರ್ಯನಿರ್ವಾಹಕರುಗಳು ಭಾಗವಹಿಸಿದ್ದರು. ಕಾರ್ಯಕ್ರಮದಲ್ಲಿ ಭಾಗವಹಿಸಿದಂತಹ ಎಲ್ಲರನ್ನೂ ಒಕ್ಕೂಟದ ಪ್ರ. ಮುಖ್ಯಕಾರ್ಯನಿರ್ವಹಣಾಧಿಕಾರಿ ಶ್ರೀಮತಿ ಸಿ.ಎಂ ಲಕ್ಷ್ಮೀ ಇವರು ಸ್ವಾಗತವನ್ನು ಕೋರಿದರು ಕೊನೆಯಲ್ಲಿ ಸಂಘದ ಮುಖ್ಯಕಾರ್ಯನಿರ್ವಾಹಕರಾದ ಶ್ರೀ ಪುರುಷೋತ್ತಮ್ ಬಿ.ಎನ್. ಇವರು ಕೊನೆಯಲ್ಲಿ ಎಲ್ಲರಿಗೂ ವಂದಿಸಿದರು.

ಮುಖ್ಯಕಾರ್ಯನಿರ್ವಹಣಾಧಿಕಾರಿ.

